ದಿನಾಂಕಃ 08/11/2022 ರಂದು ಸಾಕ್ಷಿಯನ್ನು ಕರೆಸಿ ಪ್ರಮಾಣೀಕರಿಸಲಾಯಿತು.

ಸಾಕ್ಷಿಯನ್ನು ಪಿ.ಡಬ್ಲ್ಯೂ - 1 ಎಂದು ವಿಚಾರಣೆ ಮಾಡಲಾಯಿತು.

ಮುಖ್ಯ ವಿಚಾರಣೆಃ ಶ್ರೀ ಜಿ.ಎನ್. ವಕೀಲರಿಂದಃ

ನಾನು ನನ್ನ ಮುಖ್ಯ ವಿಚಾರಣೆಯ ಬದಲಾಗಿ ಪ್ರಮಾಣಪತ್ರಿಕೆಯನ್ನು ಸಲ್ಲಿಸಿದ್ದು, ಅದರಲ್ಲಿ ಬರೆದಿರುವ ಎಲ್ಲಾ ಅಂಶಗಳು ಸತ್ಯವಾಗಿರುತ್ತವೆಂದು ಪ್ರಮಾಣಿಕರಿಸುತ್ತೇನೆ.

ಎರಡು ಪಹಣಿ ಪತ್ರಿಕೆಗಳನ್ನು ಹಾಜರುಪಡಿಸಿದ್ದು, ಅವುಗಳನ್ನು ನಿ.ಪಿ.1 ಮತ್ತು 2 ಎಂದು, ದೃಢೀಕೃತ ಕೈಬರಹದ ಪಹಣಿ ಪತ್ರಿಕೆಯನ್ನು ನಿ.ಪಿ.3 ಎಂದು, ದೃಢೀಕೃತ ಗ್ರಾಂಟ್ ಸರ್ಟಿಫಿಕೇಟ್ ಅನ್ನು ಹಾಜರುಪಡಿಸಿದ್ದು, ಅದನ್ನು ನಿ.ಪಿ.4 ಎಂದು, ತಹಸೀಲ್ದಾರ್ ರವರು ನೀಡಿರುವ ದೃಢೀಕೃತ ಸ್ಕೆಚ್ ಅನ್ನು ಹಾಜರುಪಡಿಸಿದ್ದು, ಅದನ್ನು ನಿ.ಪಿ.5 ಎಂದು, ದೃಡೀಕೃತ ಎಂ.ಆರ್, ಅನ್ನು ಹಾಜರುಪಡಿಸಿದ್ದು, ಅದನ್ನು ನಿ.ಪಿ.6 ಎಂದು, ಎಂ.ಆರ್. 2001/2002 ರ ಪ್ರತಿಯನ್ನು ಹಾಜರುಪಡಿಸಿದ್ದು, ಅದನ್ನು ನಿ.ಪಿ.7 ಎಂದು, ಆಕಾರ್ ಬಂದ್ ಪ್ರತಿಯನ್ನು ಹಾಜರುಪಡಿಸಿದ್ದು, ಅದನ್ನು ನಿ.ಪಿ.8 ಎಂದು, ಕಂದಾಯ ರಶೀದಿಯನ್ನು ಹಾಜರುಪಡಿಸಿದ್ದು, ಅದನ್ನು ನಿ.ಪಿ.9 ಎಂದು ಗುರುತಿಸಲಾಯಿತು.

(ವಾದಿ ಪರ ವಕೀಲರ ಕೋರಿಕೆಯ ಮೇರೆಗೆ ಮುಂದುವರೆದ ಮುಖ್ಯ ವಿಚಾರಣೆಯನ್ನು ಮುಂದೂಡಲಾಯಿತು.)

(ಬಹಿರಂಗ ನ್ಯಾಯಾಲಯದಲ್ಲಿ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು.)

ಓ.ಹೇ.ಕೇ.ಸ.ಇ.

ಅಪರ ಸಿವಿಲ್ ಜಡ್ಜ್ ಮತ್ತು ಜೆಎಂಎಫ್‌ಸಿ.,
ಹೊಳೆನರಸೀಪುರ